# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **205 (198)** |
| **ಮಾನ್ಯ ಸದಸ್ಯರ ಹೆಸರು** | **ಶ್ರೀ ಪ್ರತಾಪ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು)** |
| **ಉತ್ತರಿಸಬೇಕಾದ ದಿನಾಂಕ** | **06/07/2023** |
| **ಉತ್ತರಿಸುವ ಸಚಿವರು** | **ಕಾರ್ಮಿಕ ಸಚಿವರು** |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಕಾರ್ಮಿಕರಿಗೆ ನೀಡಲಾಗುತ್ತಿರುವ ವೈದ್ಯಕೀಯ ಸಹಾಯಧನ ಪ್ರಮುಖ ಖಾಯಿಲೆಗಳ ಚಿಕಿತ್ಸಾ ವೆಚ್ಚ ಹಾಗೂ ಅಪಘಾತ ಚಿಕಿತ್ಸಾ ವೆಚ್ಚದ ವಿವರಗಳೇನು; | ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ (ಉದ್ಯೋಗದ ಕ್ರಮೀಕರಣ ಮತ್ತು ಸೇವಾ ಷರತ್ತುಗಳು) ಕರ್ನಾಟಕ ನಿಯಮಗಳು 2006ರ ನಿಯಮ 46 ಮತ್ತು 48 ರಡಿ ನೋಂದಾಯಿತ ಫಲಾನುಭವಿಗಳು ಹಾಗೂ ಅವರ ಅವಲಂಬಿತರಿಗೆ ವೈದ್ಯಕೀಯ ಧನಸಹಾಯ ಹಾಗೂ ಪ್ರಮುಖ ಖಾಯಿಲೆಗಳ ಚಿಕಿತ್ಸಾ ವೆಚ್ಚವನ್ನು ಮರುಪಾವತಿ ಮಾಡಲು ಅವಕಾಶವಿರುತ್ತದೆ. ನಿಯಮ 46 ರಲ್ಲಿ ಸಣ್ಣಪುಟ್ಟ ಖಾಯಿಲೆಗಳಿಗೆ ಒಳರೋಗಿಯಾಗಿ ಚಿಕಿತ್ಸೆ ಪಡೆದಲ್ಲಿ ರೂ.300 ರಿಂದ ರೂ.20,000 ವರೆಗೆ ವೈದ್ಯಕೀಯ ಸಹಾಯಧನ ಪಡೆಯಲು ಅವಕಾಶವಿರುತ್ತದೆ.<br><br>ಪ್ರಮುಖ ಖಾಯಿಲೆಗಳ ಚಿಕಿತ್ಸಾ ವೆಚ್ಚವನ್ನು ಮರುಪಾವತಿ ಮಾಡಲು ನಿಯಮ 48ರಲ್ಲಿ ನಮೂದಿಸಲಾಗಿರುವ ನಿರ್ದಿಷ್ಟ ಖಾಯಿಲೆಗಳಿಗೆ ರೂ.2 ಲಕ್ಷಗಳ ಮಿತಿಗೆ ಒಳಪಟ್ಟು ನೋಂದಾಯಿತ ಫಲಾನುಭವಿಗಳು ಕಾರ್ಮಿಕ ಇಲಾಖೆಯ ಕಾರ್ಮಿಕ ಅಧಿಕಾರಿಗಳ ಕಛೇರಿಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ ಈ ಸೌಲಭ್ಯವನ್ನು ಪಡೆದುಕೊಳ್ಳಬಹುದು.<br>ಇದಲ್ಲದೆ, ಕಾರ್ಮಿಕನು ಅಪಘಾತಕ್ಕೆ ಒಳಪಟ್ಟು ಚಿಕಿತ್ಸೆಯನ್ನು ಪಡೆದಿದ್ದಲ್ಲಿ ಕೂಡ ಈ ನಿಯಮದಡಿ ಸೌಲಭ್ಯ ಪಡೆಯಲು ಅವಕಾಶವಿರುತ್ತದೆ. |

<table>
<tr><td>ಆ)</td><td>ಸದರಿ ಚಿಕಿತ್ಸಾ ವೆಚ್ಚಗಳನ್ನು ಅವೈಜ್ಞಾನಿಕವಾಗಿ ಅತೀ ಕಡಿಮೆ ನಿಗದಿ ಮಾಡಿರುವುದು ಮತ್ತು ಮರುಪಾವತಿ ಮಾಡುವಲ್ಲಿ ಸಾಕಷ್ಟು ವ್ಯತ್ಯಯ ಮತ್ತು ವಿಳಂಬವಾಗುತ್ತಿರುವುದರಿಂದ ತೊಂದರೆಗೊಳಗಾದ ಕಾರ್ಮಿಕರು ಸಂಕಷ್ಟಕ್ಕೀಡಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:</td><td rowspan="2">ವೈದ್ಯಕೀಯ ವೆಚ್ಚದ ಮರುಪಾವತಿಯನ್ನು ಕೇಂದ್ರ ಸರ್ಕಾರದ ಆರೋಗ್ಯ ಸೇವೆ (ಸಿ.ಜಿ.ಹೆಚ್.ಎಸ್.) ದರಗಳನ್ವಯ ಮರುಪಾವತಿ ಮಾಡಲಾಗುತ್ತಿದೆ. ಈ ಸೌಲಭ್ಯವನ್ನು ನೀಡಲು ಕಾರ್ಮಿಕ ಅಧಿಕಾರಿಗಳು ಮಂಜೂರಾತಿ ಅಧಿಕಾರಿಗಳಾಗಿದ್ದು, ಸದರಿ ಸೇವೆಯನ್ನು ಒದಗಿಸಲು ಸಕಾಲ ಕಾಯ್ದೆಯ ವ್ಯಾಪ್ತಿಯಡಿ ಕಾಲಮಿತಿಯನ್ನು ನಿಗದಿಪಡಿಸಲಾಗಿದೆ ಕಾರ್ಮಿಕ ಅಧಿಕಾರಿಗಳು ತಮ್ಮ ಕಛೇರಿಯಲ್ಲಿ ಆನ್‌ಲೈನ್ ಮೂಲಕ ಸ್ವೀಕೃತವಾದ ಎಲ್ಲಾ ಅರ್ಜಿಗಳನ್ನು ಸಕಾಲದಲ್ಲಿ ವಿಲೇವಾರಿ ಮಾಡಲು ಕ್ರಮ ಕೈಗೊಳ್ಳುತ್ತಿದ್ದಾರೆ..</td></tr>
<tr><td>ಇ)</td><td>ವೈದ್ಯಕೀಯ ಸಹಾಯಧನ, ಪ್ರಮುಖ ಖಾಯಿಲೆಗಳ ಚಿಕಿತ್ಸಾ ವೆಚ್ಚ ಹಾಗೂ ಅಪಘಾತ ಚಿಕಿತ್ಸಾ ವೆಚ್ಚವನ್ನು ಪೂರ್ಣವಾಗಿ ಕಾರ್ಮಿಕರಿಗೆ ಪಾವತಿಸಲು ಕ್ರಮ ವಹಿಸಲಾಗುವುದೇ:</td></tr>
<tr><td>ಈ)</td><td>ನಗದು ರಹಿತ ವೈದ್ಯಕೀಯ ಚಿಕಿತ್ಸಾ ಸೇವೆಯನ್ನು ಜಾರಿ ಮಾಡಲು ಸರ್ಕಾರ ಕೂಡಲೇ ಕ್ರಮ ಕೈಗೊಳ್ಳುವುದೇ?</td><td>ನಗದು ರಹಿತ ವೈದ್ಯಕೀಯ ಚಿಕಿತ್ಸಾ ಸೇವೆಯನ್ನು ಜಾರಿ ಮಾಡಲು ಯಾವುದೇ ಪ್ರಸ್ತಾವನೆ ಇರುವುದಿಲ್ಲ.</td></tr>
</table>

**ಕಾಇ 290 ಎಲ್‌ಇಟಿ 2023**

**(ಸಂತೋಷ್ ಎಸ್ ಲಾಡ್)**
**ಕಾರ್ಮಿಕ ಸಚಿವರು**